**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 11ನೇ ಫೆಬ್ರವರಿ ತಿಂಗಳು 2026 ರಂದು

**ಸಿಸಿ ನಂ.891/2025**

**ಫಿರ್ಯಾದುದಾರರುಃ** ಶ್ರೀ.ರಮೇಶ, ಬಿನ್ ವಂಗಯ್ಯ,
51 ವರ್ಷ, ವಾಸಃ ಅಸ್ವಾಳು ಗ್ರಾಮ,
ಬಿಳಿಕೆರೆ ಹೋಬಳಿ, ಹುಣಸೂರು ತಾಲ್ಲೂಕು.

**– ವಿರುದ್ಧ –**

**ಆರೋಪಿಃ** ರಘು, ಬಿನ್ ಸಣ್ಣಸ್ವಾಮಿಗೌಡ,
40 ವರ್ಷ, ವಾಸಃ ಧರ್ಮಪುರ ಗ್ರಾಮ,
ಬಿಳಿಕೆರೆ ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಭಾರತೀಯ ನಾಗರಿಕಾ ಸುರಕ್ಷಾ ಸಂಹಿತೆಯ ಕಲಂ 274 ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಶ್ರೀ.ರಮೇಶ ರವರು ಹಲವಾರು ವರ್ಷಗಳಿಂದ ಪರಿಚಿತರಾಗಿದ್ದು, ಸದರಿ ಪರಿಚಯ ಆಧಾರದ ಮೇಲೆ ನೀವು ನಿಮ್ಮ ಗೃಹಕೃತ್ಯದ ಖರ್ಚಿಗಾಗಿ ಮತ್ತು ಕೈ ಸಾಲಗಳನ್ನು ತೀರಿಸುವ ಸಲುವಾಗಿ ತುರ್ತಾಗಿ ಹಣ ಬೇಕಾಗಿದ್ದರಿಂದ ಫೆಬ್ರವರಿ ತಿಂಗಳು 2024ರಂದು ರೂ.2,00,000/–ಗಳನ್ನು ಆರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ದಿನಾಂಕಃ 16.05.2025ರಂದು ಪಾವತಿಯಾಗುವಂತೆ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಹುಣಸೂರು ಶಾಖೆಯ ಚೆಕ್ ಸಂಖ್ಯೆ033316 ಅನ್ನು ರೂ.2,00,000/–ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಅವರು ತಮ್ಮ ಖಾತೆ ಹೊಂದಿದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "88–CHQ UNUSAB" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 17.05.2025 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದಿದಾರರು ದಿನಾಂಕಃ 03.06.2025 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯ ಮೂಲಕ ನೋಟೀಸ್ ನ್ನು ಕಳುಹಿಸಿದ್ದು, ಸದರಿ ನೋಟೀಸ್ ನ್ನು ನೀವು ತೆಗೆದುಕೊಳ್ಳದೇ unclaimed ಎಂಬ

ಷರಾದೊಂದಿಗೆ ದಿನಾಂಕಃ 17.06.2025ರಂದು ವಾಪಸ್ ಬಂದಿದ್ದು, ಈ ಬಗ್ಗೆ ತಿಳುವಳಿಕೆ ಇದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಚೆಕ್‌ನಲ್ಲಿ ನಮೂದಿಸಿದ ಹಣವನ್ನು ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ.138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ